ದಿನಾಂಕ : DATE 11/1/21

ಏಳು ಶಾಸಕರಿಗೆ ಎಳ್ಳುಬೆಲ್ಲ

। ಅಮಿತ್ ಶಾ, ನಡ್ಡಾ ಜತೆ ಸಿಎಂ ಬಿಎಸ್‌ವೈ ಚರ್ಚೆ । ಬುಧವಾರ ಸಂಪುಟ ವಿಸ್ತರಣೆಗೆ ಮುಹೂರ್ತ ಫಿಕ್ಸ್
। ಏಳು ಮಂದಿ ಶಾಸಕರಿಗೆ ಸಂಕ್ರಾಂತಿ ಹಬ್ಬದ ಮುನ್ನಾ ದಿನ ಪ್ರಮಾಣ ವಚನ । ಇಂದು ಸ್ಪಷ್ಟ ಚಿತ್ರಣ ಸಾಧ್ಯತೆ

ಬೆಂಗಳೂರು: ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ದೆಹಲಿ ಭೇಟಿ ಫಲಪ್ರದಗೊಂಡಿದ್ದು, ತಮ್ಮ ನಿರೀಕ್ಷೆಯಂತೆಯೇ ಸಂಪುಟ ವಿಸ್ತರಣೆಗೆ ಬಿಜೆಪಿ ವರಿಷ್ಠರ ಮನವೊಲಿಸುವಲ್ಲಿ ಸಫಲರಾಗಿದ್ದಾರೆ.

ಸಂಕ್ರಾಂತಿಗೆ ಮುನ್ನಾ ದಿನ ಬುಧವಾರ ಸಂಪುಟ ವಿಸ್ತರಣೆಗೆ ಮುಹೂರ್ತವನ್ನು ಫಿಕ್ಸ್ ಮಾಡಿ, ನಂಬಿದವರ ಕೈ ಹಿಡಿದಿದ್ದಾರೆ. ಏಳು ಮಂದಿ ಶಾಸಕರಿಗೆ ಮಂತ್ರಿಗಿರಿ ನೀಡುವುದಾಗಿ ಮುಖ್ಯಮಂತ್ರಿ ಪ್ರಕಟಿಸಿದರಾದರೂ, ಯಾರು ಎಂಬ ಸಸ್ಪೆನ್ಸ್ ಬಿಟ್ಟುಕೊಟ್ಟಿಲ್ಲ.

ಬುಧವಾರ ಅಪರಾಹ್ನದ ಬಳಿಕ ಪ್ರಮಾಣ ವಚನ ಸ್ವೀಕಾರ ನಡೆಯಲಿದೆ ಎಂದು ಬಿಎಸ್‌ವೈ ಹೇಳಿದ್ದಾರೆ. ಅಂದು ಎಳ್ಳು ಅಮಾವಾಸ್ಯೆ ಆಗಿರುವುದು ವಿಶೇಷ.

ಮುಖ್ಯಮಂತ್ರಿ ಯಡಿಯೂರಪ್ಪ ಭಾನುವಾರ ದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಹಾಗೂ ಪಕ್ಷದ ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಅವರೊಂದಿಗೆ ಸುಮಾರು ಒಂದು ಗಂಟೆ ಚರ್ಚೆ ನಡೆಸಿದ್ದು, ಸಂಪುಟ ವಿಸ್ತರಣೆ, ಪಕ್ಷ ಸಂಘಟನೆ, ಉಪ ಚುನಾವಣೆಗಳ ಸಿದ್ಧತೆ ಸಂಬಂಧ ಮಾತುಕತೆ ನಡೆಸಿದ್ದಾರೆ ಎಂದು ತಿಳಿದು ಬಂದಿದೆ.

ಭವಿಷ್ಯದಲ್ಲಿ ರಾಜ್ಯದಲ್ಲಿ ಯಡಿಯೂರಪ್ಪ ನಂತರದ ನಾಯಕತ್ವದ ಕುರಿತಂತೆಯೂ ಚರ್ಚೆ ನಡೆದಿದೆ ಎಂದು ಹೇಳಲಾಗಿದೆ. ಸಂಪುಟ ವಿಸ್ತರಣೆ ಅಥವಾ ಪುನಾರಚನೆ ಅಥವಾ ಯಾವುದೇ ಬದಲಾವಣೆ, ಬೆಳವಣಿಗೆಗಳ ಬಗ್ಗೆ ಎಚ್ಚರಿಕೆ ಹೆಜ್ಜೆ ಇಡಲು ವರಿಷ್ಠರು ಮುಂದಾಗಿದ್ದಾರೆ. ಏನೇ ಇದ್ದರೂ, ಯಡಿಯೂರಪ್ಪ ಅವರನ್ನು ವಿಶ್ವಾಸಕ್ಕೆ ತೆಗೆದು ಕೊಂಡೇ ತೀರ್ಮಾನಿಸಲು ವರಿಷ್ಠರು ಚಿಂತಿಸಿದ್ದಾರೆ ಎನ್ನಲಾಗಿದೆ.

ಸಭೆಯ ನಂತರ ಸುದ್ದಿಗಾರರ ಜತೆ ನಗುನಗುತ್ತಲೇ ಮಾತನಾಡಿದ ಮುಖ್ಯಮಂತ್ರಿ, ಸಚಿವ ಸಂಪುಟ ವಿಸ್ತರಣೆ ಕುರಿತು ಶೀಘ್ರವೇ ಶುಭ ಸುದ್ದಿ ಸಿಗಲಿದೆ ಎಂದಷ್ಟೇ ಹೇಳಿದರು. ಆದರೆ, ರಾತ್ರಿ ಬೆಂಗಳೂರಿಗೆ ಬಂದ ಬಳಿಕ ವಿಮಾನ ನಿಲ್ದಾಣದಲ್ಲಿ ಹೇಳಿಕೆ ನೀಡಿದ ಸಿಎಂ, ಸಂಪುಟ ವಿಸ್ತರಣೆ ಕುರಿತು ಸ್ಪಷ್ಟಪಡಿಸಿದರು.

ಇದಕ್ಕೂ ಮುನ್ನ ಕೇಂದ್ರದ ಮೂವರು ನಾಯಕರೊಂದಿಗೆ ರಾಜ್ಯದ ಎಲ್ಲ ಬೆಳವಣಿಗೆಗಳ ಕುರಿತು ಸುದೀರ್ಘ ಚರ್ಚೆ ಮಾಡಲಾಗಿದೆ. ನನಗೆ ಇಂದಿನ ಸಭೆ ಅತ್ಯಂತ ಖುಷಿ, ಸಮಾಧಾನ ತಂದಿದೆ. ಪಕ್ಷದ ವರಿಷ್ಠರು ಸಂಪುಟ ವಿಸ್ತರಣೆಯ ಬಗ್ಗೆ ಆದಷ್ಟು ಬೇಗ ಎಲ್ಲರಿಗೂ ಶುಭ ಸುದ್ದಿ ನೀಡಲಿದ್ದಾರೆ ಎಂದು ಹೇಳಿದ್ದರು.

ರಾಜ್ಯದಲ್ಲಿ ಇತ್ತೀಚೆಗೆ ನಡೆದ ಗ್ರಾಮ ಪಂಚಾಯತಿ ಚುನಾವಣೆಯಲ್ಲಿ ಪಕ್ಷದ ಸಾಧನೆ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಅಲ್ಲದೆ ಮುಂದಿನ ತಾಲೂಕು, ಜಿಲ್ಲಾ ಪಂಚಾಯತಿ ಚುನಾವಣೆ ಹಾಗೂ ಮೂರು ಕ್ಷೇತ್ರಗಳ ಉಪ ಚುನಾವಣೆಗೆ ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳುವಂತೆ ಕೇಂದ್ರ ನಾಯಕರು ಸೂಚನೆ ನೀಡಿದ್ದಾರೆ ಎಂದೂ ಅವರು ತಿಳಿಸಿದರು. ಮುಂದಿನ ಎರಡು ವರ್ಷ ನೀವೇ ಮುಖ್ಯಮಂತ್ರಿ ಯಾಗಿರುತ್ತೀರಾ ಎಂಬ ಪ್ರಶ್ನೆಗೂ ನಗುತ್ತಲೇ 'ನೀವೇ ಉತ್ತರಿಸಬೇಕು,' ಎಂದು ಹೇಳಿದರು.

[illegible]: ಆಪ್ತ ಮೂಲಗಳ ಪ್ರಕಾರ ಸಂಕ್ರಾಂತಿ ನಂತರ ಕೇಂದ್ರ ಗೃಹ ಸಚಿವ ಅಮಿತ್ ಶಾ ರಾಜ್ಯಕ್ಕೆ ಆಗಮಿಸಲಿದ್ದು, ಅವರ ಭೇಟಿಯ ನಂತರ ಸಂಪುಟ ವಿಸ್ತರಣೆಗೆ ಒಪ್ಪಿಗೆ ನೀಡುವ ಸಾಧ್ಯತೆ ಇದೆ ಎಂದು ತಿಳಿದು ಬಂದಿದೆ.

ಪಕ್ಷದ ವರಿಷ್ಠರಾದ ಅಮಿತ್ ಶಾ, ಜೆ.ಪಿ.ನಡ್ಡಾ, ಅರುಣ್ ಸಿಂಗ್ ಜತೆ ಮುಖ್ಯಮಂತ್ರಿ ಯಡಿಯೂರಪ್ಪ.

ಯಡಿಯೂರಪ್ಪ ಅವರ ನಾಯಕತ್ವ ವಿಷಯದಲ್ಲಿ ಯಾವುದೇ ಗೊಂದಲ ಇಲ್ಲ. ಆ ಗೊಂದಲ ಇರುವುದು ಮಾಧ್ಯಮದಲ್ಲಿ ಮಾತ್ರ. ಸಂಪುಟ ವಿಸ್ತರಣೆಯ ಬಗ್ಗೆ ಯಡಿಯೂರಪ್ಪ ಅವರು ಹೇಳಿರುವ ಮಾಹಿತಿ ಸರಿಯಾಗಿದೆ.

• ಬಿ.ವೈ. ವಿಜಯೇಂದ್ರ ರಾಜ್ಯ ಬಿಜೆಪಿ ಉಪಾಧ್ಯಕ್ಷ

ಮೋದಿ ಭೇಟಿಗೆ ವಿಫಲ ಯತ್ನ?

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೊಂದಿಗೆ ಸಭೆಯ ನಂತರ ಬೆಂಗಳೂರಿಗೆ ಆಗಮಿಸುವ ಮೊದಲು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಲು ಮುಖ್ಯಮಂತ್ರಿ ಯಡಿಯೂರಪ್ಪ ಪ್ರಯತ್ನ ನಡೆಸಿದ್ದರು ಎನ್ನಲಾಗಿದ್ದು, ಆದರೆ ಭೇಟಿ ಸಾಧ್ಯವಾಗಿಲ್ಲ ಎಂದು ಹೇಳಲಾಗಿದೆ.

ಯಾರಿಗೆ ಮಂತ್ರಿಗಿರಿ?

ಬುಧವಾರ ಸಂಪುಟ ವಿಸ್ತರಣೆ ನಡೆಯುತ್ತದೆ ಎಂದು ಮುಖ್ಯಮಂತ್ರಿ ಪ್ರಕಟಿಸಿದ ಬೆನ್ನಲ್ಲೇ ಸಚಿವಾಕಾಂಕ್ಷಿಗಳಲ್ಲಿ ಆಸೆ ಚಿಗುರಿದೆ. ಪಕ್ಷವನ್ನು ಅಧಿಕಾರಕ್ಕೆ ತರಲು ನೆರವಾದ ಎಂಟಿಬಿ ನಾಗರಾಜ್, ಆರ್. ಶಂಕರ್, ಮುನಿರತ್ನ, ಸಿ.ಪಿ.ಯೋಗೇಶ್ವರ್ ಅವರಿಗೆ ಮಂತ್ರಿಗಿರಿ ಬಹುತೇಕ ಖಚಿತ ಎನ್ನಲಾಗಿದೆ. ಆದರೆ ಈ ಪಟ್ಟಿಯಲ್ಲಿ ಎಚ್. ವಿಶ್ವನಾಥ್ ಅವರ ಹೆಸರು ಕೇಳಿ ಬಂದಿಲ್ಲ. ಹಾಗೆಯೇ ಮೂಲ ಬಿಜೆಪಿಗರಾದ ಸುನೀಲ್ ಕುಮಾರ್, ಅರವಿಂದ ಲಿಂಬಾವಳಿ, ಉಮೇಶ್ ಕತ್ತಿ, ತಿಪ್ಪಾರೆಡ್ಡಿ, ಹಾಲಪ್ಪ ಆಚಾರ್ ಅವರಿಗೆ ಸಚಿವ ಭಾಗ್ಯ ಸಿಗುವ ಸಾಧ್ಯತೆ ಇದೆ ಎನ್ನಲಾಗಿದೆ. ಈ ಬಗ್ಗೆ ಸ್ಪಷ್ಟಪಡಿಸಿರುವ ಮುಖ್ಯಮಂತ್ರಿ ಯಡಿಯೂರಪ್ಪ ಸೋಮವಾರ ಪಕ್ಷದ ವರಿಷ್ಠರು ಅಂತಿಮಗೊಳಿಸಲಿದ್ದಾರೆ ಎಂದಿದ್ದಾರೆ.

ಇದೇ ಸಂಕ್ರಾಂತಿ ಸೂಚನೆ!

ಸಂಕ್ರಾಂತಿ ವೇಳೆ ರಾಜ್ಯ ರಾಜಕಾರಣದಲ್ಲಿ ಬದಲಾವಣೆಯಾಗುತ್ತದೆ ಎಂದು ಹಲವು ಬಾರಿ ಹೇಳುತ್ತಿದ್ದ ಶಾಸಕ ಬಸನಗೌಡ ಯತ್ನಾಳ್, ಭಾನುವಾರವೂ ಇದೇ ವರಸೆ ಮುಂದುವರೆಸಿದರು. 'ಮುಖ್ಯಮಂತ್ರಿಗಳನ್ನು ದಿಲ್ಲಿಗೆ ಕರೆಯಿಸಿರುವುದೇ ಸಂಕ್ರಾಂತಿ ಸೂಚನೆ' ಎಂದು ಒಗಟಾಗಿ ಮಾತನಾಡಿದ ಯತ್ನಾಳ್, "ಸಂಕ್ರಾಂತಿ ನಂತರ ಸಂಪುಟ ವಿಸ್ತರಣೆಯಾಗಬಹುದು, ಪುನರ್ರಚನೆಯಾಗಬಹುದು ಅಥವಾ ಏನು ಬೇಕಾದರೂ ಆಗಬಹುದು" ಎಂದು ಹೇಳಿದರು.

ರಾಘವೇಂದ್ರಗೆ ಮಂತ್ರಿಗಿರಿ?

ಪಕ್ಷದ ಮೂಲಗಳ ಪ್ರಕಾರ ಹೈಕಮಾಂಡ್ ಯಡಿಯೂರಪ್ಪ ಅವರನ್ನು ಬದಲಾಯಿಸಿದರೆ ಮುಂದೆ ರಾಜ್ಯದಲ್ಲಿ ಯಾವ ರೀತಿ ಪಕ್ಷ ಸಂಘಟನೆ ಮಾಡಬೇಕು ಮತ್ತು ಅವರಿಗೆ ಯಾವ ಸ್ಥಾನ ಮಾನ ನೀಡಲಾಗುತ್ತದೆ ಎನ್ನುವ ಕುರಿತು

ಯಡಿಯೂರಪ್ಪ ಅವರೊಂದಿಗೆ ಮುಕ್ತವಾಗಿ ಚರ್ಚೆ ನಡೆಸಿದೆ ಎನ್ನಲಾಗಿದೆ. ಯಡಿಯೂರಪ್ಪ ಅವರನ್ನು ಗೌರವಯುತವಾಗಿ ಸಿಎಂ ಸ್ಥಾನದಿಂದ ಕೆಳಗಿಳಿಸಿ, ಅವರಿಗೆ ದಕ್ಷಿಣ ಭಾರತದ ಯಾವುದಾದರೂ ರಾಜ್ಯದ ರಾಜ್ಯಪಾಲರ ಹುದ್ದೆ ನೀಡುವ ಬಗ್ಗೆ ಹೈಕಮಾಂಡ್ ಆಲೋಚನೆ ಹೊಂದಿದೆ ಎಂದು ತಿಳಿದು ಬಂದಿದೆ. ಅಲ್ಲದೇ ಅವರ ಪುತ್ರ ಹಾಗೂ ಶಿವಮೊಗ್ಗ ಸಂಸದ ಬಿ.ವೈ ರಾಘವೇಂದ್ರ ಅವರಿಗೆ ಕೇಂದ್ರ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡುವ ಬಗ್ಗೆಯೂ ಹೈಕಮಾಂಡ್ ನಾಯಕರು ಆಲೋಚನೆ ಹೊಂದಿದ್ದಾರೆ ಎನ್ನಲಾಗಿದ್ದು, ಅದನ್ನು ಮುಖ್ಯಮಂತ್ರಿ ಗಮನಕ್ಕೆ ತಂದಿದ್ದಾರೆ ಎಂದು ಹೇಳಲಾಗಿದೆ.